"1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (3ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (3ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಮತ್ತ ಹಣಕಾಸು, ಯೋಜನಾ ಹಾಗೂ ಕಾರ್ಮಿಕ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ,

"1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (3ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. X-3

(ಬ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

(i) ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕ, 1996 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು ಮತ್ತು ಹಣಕಾಸು, ಯೋಜನಾ ಹಾಗೂ ಕಾರ್ಮಿಕ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, ಈ ವಿಧೇಯಕವು 1996-97ನೇ ಹಣಕಾಸಿನ ವರ್ಷಕ್ಕೆ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 1,36,1 7,69,26,000 ರೂಪಾಯಿಗಳನ್ನು ವಿವಿಧ ಸೇವೆಗಳಿಗೆ ಖರ್ಚು ಮಾಡಲು ಈ ಸದನವು ತನ್ನ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(X-3 — ಅನುಬಂಧ),

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ಮತ್ತು 3 ಹಾಗೂ ಅನುಸೂಚಿ

ಅಧ್ಯಕ್ಷರು : "ಖಂಡ 2 ಮತ್ತು 3 ಹಾಗೂ ಅನುಸೂಚಿ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಹಾಗೂ ಅನುಸೂಚಿ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯ ಮಂತ್ರಿಗಳು ಮತ್ತು ಹಣಕಾಸು, ಯೋಜನಾ ಹಾಗೂ ಕಾರ್ಮಿಕ ಮಂತ್ರಿಗಳು) ಮಾನ್ಯ ಅಧ್ಯಕ್ಷರೆ,

"1996ರ ಕರ್ನಾಟಕ ಧನ ವಿನಿಯೋಗ (ನಂ.2)ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ii) ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕ, 1996

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯ ಮಂತ್ರಿಗಳು ಮತ್ತು ಹಣಕಾಸು, ಯೋಜನಾ ಹಾಗೂ ಕಾರ್ಮಿಕ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು